# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು

ಸಂಖ್ಯೆ : ಸಿಎಸ್1/ಗಣಕಶಾಖೆ/ಎಸ್.ಎಸ್.ಎಲ್.ಸಿ./ಶುಲ್ಕ ಪಾವತಿ/01/2023-24 ದಿನಾಂಕ: 01-01-2024

**- ಸುತ್ತೋಲೆ -**

ವಿಷಯ: ಮಾರ್ಚ್/ಏಪ್ರಿಲ್-2024 ರ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆ - 1ಕ್ಕೆ ನೋಂದಣಿಯಾಗಿರುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿಸುವ ಬಗ್ಗೆ.

ಉಲ್ಲೇಖ: 1) ಮಂಡಲಿಯ ಮಾರ್ಗಸೂಚಿ ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ./ಅಧಿ/ಮಾರ್ಚ್-24/14/2023-24 ದಿನಾಂಕ: 04-10-2023

2) ಮಂಡಲಿಯ ಗಣಕ ಶಾಖೆಯ ಸುತ್ತೋಲೆ ಸಂ : ಸಿಎಸ್1/ ಎಸ್.ಎಸ್.ಎಲ್.ಸಿ/ಮಾರ್ಚ್-2024/01/2023-24 ದಿನಾಂಕ: 10-10-2023

*******

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ವತಿಯಿಂದ ನಡೆಯಲಿರುವ ಮಾರ್ಚ್/ಏಪ್ರಿಲ್-2024ರ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆ - 1ಕ್ಕೆ ಅರ್ಹ ಅಭ್ಯರ್ಥಿಗಳ ನೋಂದಣಿ ಮಾಹಿತಿಗಳನ್ನು ಮುಖ್ಯ ಶಿಕ್ಷಕರ ವತಿಯಿಂದ ಮಂಡಲಿಯ ಜಾಲತಾಣದ (https://kseab.karnataka.gov.in) ಶಾಲಾ ಲಾಗಿನ್‌ನಲ್ಲಿ ಈಗಾಗಲೇ ಪಡೆಯಲಾಗಿದೆ. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರಿಗೆ ತಮ್ಮ ಶಾಲೆಯ ಮಾರ್ಚ್/ಏಪ್ರಿಲ್-2024ರ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ಬರೆಯಲಿರುವ ವಿದ್ಯಾರ್ಥಿಗಳ (ಶಾಲಾ ಅಭ್ಯರ್ಥಿ, ಖಾಸಗಿ ಅಭ್ಯರ್ಥಿ, ಪುನರಾವರ್ತಿತ ಶಾಲಾ ಹಾಗೂ ಪುನರಾವರ್ತಿತ ಖಾಸಗಿ ಅಭ್ಯರ್ಥಿಗಳು ಮತ್ತು ಫಲಿತಾಂಶ ಉತ್ತಮಪಡಿಸಿಕೊಳ್ಳಲು ನೋಂದಾಯಿಸಿರುವ ಅಭ್ಯರ್ಥಿಗಳು) ವಿವರಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡಲು ಅವಕಾಶ ಕಲ್ಪಿಸಲಾಗಿತ್ತು. ಪ್ರಸ್ತುತ, ನೋಂದಣಿಯಾಗಿರುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಮಂಡಲಿಗೆ ಪಾವತಿಸಬೇಕಾಗಿದೆ.

1) ಮಾರ್ಚ್/ಏಪ್ರಿಲ್-2024ರ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆ-1ಕ್ಕೆ ನೋಂದಣಿಯಾಗಿರುವ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ಪಾವತಿ ಚಲನ್ **ಮಂಡಲಿಯ ಶಾಲಾ ಲಾಗಿನ್‌ನಲ್ಲಿಯೇ ದಿನಾಂಕ: 02-01-2024** ರಿಂದ ಜನರೇಟ್ ಆಗುತ್ತದೆ.
2) **ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್‌ನ್ನು ಬಳಸಿಯೇ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಮಂಡಲಿಯ ಯಾವುದೇ ಇತರ ಚಲನ್ ಬಳಸಿ ಶುಲ್ಕ ಪಾವತಿಸಬಾರದು. ಪಾವತಿಸಿದಲ್ಲಿ ಅಂತಹ ಚಲನ್‌ನ್ನು ಪರಿಗಣಿಸಲಾಗುವುದಿಲ್ಲ.**
3) **ಒಮ್ಮೆ ಚಲನ್ ಡೌನ್‌ಲೋಡ್ ಮಾಡಿಕೊಂಡ ನಂತರ ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳ ಮಾಹಿತಿಯನ್ನು ಸೇರ್ಪಡೆ/ಅಪ್‌ಡೇಟ್ ಮಾಡಲು ಅವಕಾಶವಿರುವುದಿಲ್ಲ. ಆದ್ದರಿಂದ ಯಾವುದೇ ಸೇರ್ಪಡೆ, updation ಮಾಡಬೇಕಾಗಿದ್ದಲ್ಲಿ ಅದನ್ನು ಮಾಡಿದ ನಂತರವೇ ಚಲನ್ ಡೌನ್‌ಲೋಡ್ ಮಾಡಿಕೊಳ್ಳುವುದು.**
4) ಮಂಡಲಿಯ ಶಾಲಾ ಲಾಗಿನ್‌ನಲ್ಲಿ ಚಲನ್ ಜನರೇಟ್ ಮಾಡಲು Registration for 2024 SSLC Exam-1 ಮೆನುವಿನಲ್ಲಿ ನೀಡಲಾಗಿರುವ Dropdown list ನಲ್ಲಿರುವ Download Challan ಮೆನು ಮೇಲೆ ಕ್ಲಿಕ್ ಮಾಡಿದಾಗ, ಮೊದಲು ಅಂತಿಮ ನಾಮಿನಲ್ ರೋಲ್‌ನ್ನು ಡೌನ್‌ಲೋಡ್ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಅಂತಿಮ ನಾಮಿನಲ್ ರೋಲ್‌ನ್ನು ಡೌನ್‌ಲೋಡ್ ಮಾಡಿಕೊಂಡ ನಂತರವಷ್ಟೇ ಚಲನ್ ಡೌನ್‌ಲೋಡ್ ಆಗುತ್ತದೆ.
5) ಒಂದು ವೇಳೆ ತಮ್ಮ ಶಾಲೆಯಲ್ಲಿ ಪರೀಕ್ಷಾ ನೋಂದಣಿಗೆ ಸಂಬಂಧಿಸಿದಂತೆ ಯಾವುದಾದರೂ Errors ಇದ್ದಲ್ಲಿ ಆ Errors List display ಆಗುತ್ತದೆ. ಮುಖ್ಯಶಿಕ್ಷಕರು ಆ Errors ನ್ನು ಸರಿಪಡಿಸಿದ ನಂತರವೇ Challan Generate ಆಗುತ್ತದೆ.

   Error type 1: Photo / Signature not uploaded

   Error type 2: RD Number not entered for students who have claimed Fee Exemption

--2

6) ಮುಖ್ಯ ಶಿಕ್ಷಕರು ಚಲನ್‌ನ್ನು ಡೌನ್‌ಲೋಡ್ ಮಾಡಿಕೊಂಡ ನಂತರ ತಮ್ಮ ಶಾಲೆಯ ವತಿಯಿಂದ ಮಾರ್ಚ್-2024ರ ಪರೀಕ್ಷೆಗೆ ನೋಂದಣಿಯಾಗಿರುವ ಶಾಲಾ ವಿದ್ಯಾರ್ಥಿಗಳ (CCERF), ಖಾಸಗಿ ವಿದ್ಯಾರ್ಥಿಗಳ(CCEPF), ಪುನರಾವರ್ತಿತ ಶಾಲಾ ಅಭ್ಯರ್ಥಿಗಳ (CCERR), ಪುನರಾವರ್ತಿತ ಖಾಸಗಿ ಅಭ್ಯರ್ಥಿಗಳ (CCEPR), ಫಲಿತಾಂಶ ಉತ್ತಮಪಡಿಸಿಕೊಳ್ಳಲು ನೋಂದಾಯಿಸಿರುವ ಅಭ್ಯರ್ಥಿಗಳು (Improvement Candidates) ಹಾಗೂ 2003ರಿಂದ 2010ರವರೆಗಿನ NSR ಮತ್ತು NSPR ಅಭ್ಯರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಚಲನ್ ಜನರೇಟ್ ಆಗಿದೆಯೇ ಎಂದು ಪರಿಶೀಲಿಸಿಕೊಳ್ಳತಕ್ಕದ್ದು.

7) ಪರೀಕ್ಷಾ ಶುಲ್ಕ ಪಾವತಿಸುವ ಚಲನ್ ದ್ವಿಪ್ರತಿಯಲ್ಲಿ (Bank copy & School copy) ಜನರೇಟ್ ಆಗುತ್ತದೆ. ಅದನ್ನು ಬಳಸಿ Union Bank of India ಅಥವಾ ಯಾವುದೇ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಬೇಕು. Union Bank of India ನಲ್ಲಿ ಪಾವತಿಸಿದಲ್ಲಿ ಬ್ಯಾಂಕ್ ಸೇವಾ ಶುಲ್ಕ ರೂ. 5/- ಆಗಿರುತ್ತದೆ. ಇತರೆ ಯಾವುದೇ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಪಾವತಿಸಿದಲ್ಲಿ ಆಯಾ ಬ್ಯಾಂಕ್ ವಿಧಿಸುವ ಸೇವಾ ಶುಲ್ಕವನ್ನು ಭರಿಸಬೇಕಿರುತ್ತದೆ. ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ Bank copy ಯನ್ನು ಬ್ಯಾಂಕಿನಲ್ಲಿಯೇ ಉಳಿಸಿಕೊಂಡು School copy ಯನ್ನು ತಮಗೆ ಹಿಂದಿರುಗಿಸಲಾಗುತ್ತದೆ.

**ಪರೀಕ್ಷಾ ಶುಲ್ಕದ ಆನ್‌ಲೈನ್ ಚಲನ್ ಮುದ್ರಿಸಿಕೊಳ್ಳಲು ಮತ್ತು ಶುಲ್ಕ ಪಾವತಿಸಲು ನಿಗದಿಪಡಿಸಿದ ದಿನಾಂಕ**

| ಕ್ರ. ಸಂ. | ವಿವರ | ನಿಗದಿಪಡಿಸಿದ ದಿನಾಂಕ |
|---|---|---|
| 1 | ಮಂಡಲಿ ಜಾಲತಾಣದ ಶಾಲಾ ಲಾಗಿನ್ ಮೂಲಕ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಳ್ಳಲು ನಿಗದಿಪಡಿಸಿದ ಅವಧಿ | 02-01-2024 ರಿಂದ 10-01-2024 |
| 2 | ಕ್ರಮ ಸಂಖ್ಯೆ-1ರಂತೆ ಚಲನ್ ಮುದ್ರಿಸಿಕೊಂಡು ಬ್ಯಾಂಕ್‌ಗೆ ಪರೀಕ್ಷಾ ಶುಲ್ಕ ಜಮೆ ಮಾಡಲು ನಿಗದಿಪಡಿಸಿದ ಅವಧಿ | 02-01-2024 ರಿಂದ 11-01-2024 |
| 3 | 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಪರೀಕ್ಷಾ ಶುಲ್ಕವನ್ನು ಹಳೆಯ ಪದ್ಧತಿಯಂತೆ ಮಂಡಲಿಯ ನೆಫ್ಟ್ ಚಲನ್ ಮೂಲಕ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಲು ನಿಗದಿಪಡಿಸಿದ ಅಂತಿಮ ದಿನಾಂಕ | 11-01-2024 |
| 4 | **ಕೆಳಕಂಡ ದಾಖಲೆಗಳನ್ನು ಮಂಡಲಿಗೆ ಸಲ್ಲಿಸಲು ನಿಗದಿಪಡಿಸಿದ ಅಂತಿಮ ದಿನಾಂಕ** 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) MSA ಮತ್ತು ಹಿಂದಿನ ಪದ್ಧತಿಯಂತೆ ಮಂಡಲಿಯ ನೆಫ್ಟ್ ಚಲನ್ ಮೂಲಕ ಶುಲ್ಕ ಪಾವತಿಸಿದ ಮೂಲ ಚಲನ್ ಹಾಗೂ ಸಂಬಂಧಿಸಿದ ಇತರೆ ದಾಖಲೆಗಳು | 18-01-2024 |

ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯ ಶಾಲೆಗಳ ಮುಖ್ಯಸ್ಥರು ನಿಗದಿತ ಅವಧಿಯಲ್ಲಿ ಶುಲ್ಕ ಪಾವತಿ ಮಾಡುವ ಬಗ್ಗೆ ಕ್ರಮ ವಹಿಸುವುದು.

1/1/2024.
(ಗೋಪಾಲಕೃಷ್ಣ ಹೆಚ್.ಎನ್.)
ನಿರ್ದೇಶಕರು, (ಪರೀಕ್ಷೆಗಳು)

**ಅಗತ್ಯ ಕ್ರಮಕ್ಕಾಗಿ :**

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ